## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನ 14ನೇ ಹಣಕಾಸು ಆಯೋಗದ ಎರಡನೇ ಕಂತಿನ ಸಾಮಾನ್ಯ ಮೂಲ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಭಾರತ ಸರ್ಕಾರದ ಪತ್ರ ಸಂ.ಎಫ್. 13(40), ಎಫ್‌ಎಫ್‌ಸಿ/ಎಫ್‌ಸಿಡಿ/2015-16, ದಿನಾಂಕ:08-10-2016.
2. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: ಆಇ 44 ಬಿಜಿಎಲ್ 2016, ದಿನಾಂಕ:10-11-2016.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಸ 2015, ದಿನಾಂಕ: 10-03-2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 35 ಗ್ರಾಪಸ 2016, ದಿನಾಂಕ:29-07-2016.

**ಪ್ರಸ್ತಾವನೆ:**

14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2015-16ನೇ ಸಾಲಿನಿಂದ 2019-20ರ ಸಾಲಿನವರೆಗಿನ 5 ವರ್ಷದ ಅವಧಿಗೆ ಸಾಮಾನ್ಯ ಮೂಲ ಅನುದಾನ ರೂ.8359.79 ಕೋಟಿಗಳನ್ನು ಭಾರತ ಸರ್ಕಾರವು ನಿಗಧಿಪಡಿಸಿರುತ್ತದೆ.

14ನೇ ಹಣಕಾಸು ಆಯೋಗದ 2016-17ನೇ ಸಾಲಿನ ಸಾಮಾನ್ಯ ಮೂಲ ಅನುದಾನದ (General Basic Grants) ಎರಡನೇ ಕಂತು ರೂ.684,04,69,000/- (ಆರು ನೂರ ಎಂಬತ್ನಾಲ್ಕು ಕೋಟಿ ನಾಲ್ಕು ಲಕ್ಷದ ಅರವತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಭಾರತ ಸರ್ಕಾರವು ಮೇಲೆ ಓದಲಾದ (1)ರ ಪತ್ರದನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸಂಪೂರ್ಣವಾಗಿ ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (2)ರ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ 2016-17ನೇ ಸಾಲಿನ ಸಾಮಾನ್ಯ ಮೂಲ ಅನುದಾನದ ಎರಡನೇ ಕಂತು ರೂ.684,04,69,000/- (ಆರು ನೂರ ಎಂಬತ್ನಾಲ್ಕು ಕೋಟಿ ನಾಲ್ಕು ಲಕ್ಷದ ಅರವತ್ತೊಂಬತ್ತು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

ಪ್ರಸ್ತುತ 2016-17ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತಿಯ ಲೆಕ್ಕ ಶೀರ್ಷಿಕೆ 2515-00-198-6-11-300(ಯೋಜನೇತರ)ಯಡಿ ರೂ.138862.00ಲಕ್ಷಗಳನ್ನು ಒದಗಿಸಿರುತ್ತದೆ. ಸದರಿ ಅನುದಾನದಲ್ಲಿ ರೂ.684,04,69,000/-ಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ನೇರವಾಗಿ ಸಂಬಂಧಪಟ್ಟ ಬ್ಯಾಂಕು ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ.

ಆದುದರಿಂದ ರಾಜ್ಯದಲ್ಲಿನ ಒಟ್ಟು 6022 ಗ್ರಾಮ ಪಂಚಾಯತಿಗಳಿಗೆ ರೂ.684,04,69,000/-ಗಳ 14ನೇ ಹಣಕಾಸು ಆಯೋಗದ ಎರಡನೇ ಕಂತಿನ ಸಾಮಾನ್ಯ ಮೂಲ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಿದ ಸಾಮಾನ್ಯ ಮೂಲ ಅನುದಾನದ ಹಾಗೂ ಸಾಮಾನ್ಯ ಕಾರ್ಯಕ್ಷಮತೆ ಅನುದಾನದಿಂದ ಶೇ.25ರಷ್ಟು ಅನುದಾನವನ್ನು ಮೇಲೆ ಓದಲಾದ (3)ರಂತೆ ESCOM ಕಂಪನಿಗಳಿಗೆ ಪಾವತಿಸಬೇಕಾಗಿರುತ್ತದೆ.

ಮುಂದುವರೆದು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸುವ ರೂ.684,04,69,000/-ಗಳಲ್ಲಿ ಶೇ.25ರಷ್ಟು ಅಂದರೆ, ರೂ.171,01,17,250/- (ಒಂದು ನೂರ ಎಪ್ಪತ್ತೊಂದು ಕೋಟಿ ಒಂದು ಲಕ್ಷದ ಹದಿನೇಳು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ)ಗಳ ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಯಲ್ಲಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆ ಮಾಡಲು ಮೇಲೆ ಓದಲಾದ (3)ರ ಆದೇಶದಲ್ಲಿ ಸೂಚಿಸಲಾಗಿರುತ್ತದೆ. ESCROW ಖಾತೆಗಳಿಗೆ ಬಿಡುಗಡೆಗೊಳಿಸಿ, ಉಳಿದ ರೂ.513,03,51,750/- (ಐದು ನೂರ ಹದಿಮೂರು ಕೋಟಿ ಮೂರು ಲಕ್ಷದ ಐವತ್ತೊಂದು ಸಾವಿರದ ಏಳು ನೂರ ಐವತ್ತು ರೂಪಾಯಿಗಳು ಮಾತ್ರ)ಗಳನ್ನು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 35 ಗ್ರಾಪಸ 2016(ಪಿ-1), ದಿನಾಂಕ:15-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2016-17ನೇ ಸಾಲಿನ ಎರಡನೇ ಕಂತಿನ ಸಾಮಾನ್ಯ ಮೂಲ ಅನುದಾನವನ್ನು ಭಾರತ ಸರ್ಕಾರವು ರಾಜ್ಯಕ್ಕೆ ಬಿಡುಗಡೆ ಮಾಡಿರುವ ರೂ.684,04,69,000/-ಗಳಲ್ಲಿ ರೂ.513,03,51,750/- (ಐದು ನೂರ ಹದಿಮೂರು ಕೋಟಿ ಮೂರು ಲಕ್ಷದ ಐವತ್ತೊಂದು ಸಾವಿರದ ಏಳು ನೂರ ಐವತ್ತು ರೂಪಾಯಿಗಳು ಮಾತ್ರ)ಗಳ (ಅನುಬಂಧ) ಅನುದಾನವನ್ನು 6022 ಗ್ರಾಮ ಪಂಚಾಯತಿಗಳ ಸಂಬಂಧಪಟ್ಟ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಆನ್‌ಲೈನ್ ಮುಖಾಂತರ ಜಮೆ ಮಾಡಲು ಆದೇಶಿಸಿದೆ.

ಪ್ರಸ್ತುತ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುತ್ತಿರುವ ರೂ.684,04,69,000/-ಗಳಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಬೀದಿ ದೀಪಗಳು ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ ಪಾವತಿಸಲು ಶೇ.25ರಷ್ಟು ಅಂದರೆ, ರೂ.171,01,17,250/-(ಒಂದು ನೂರ ಎಪ್ಪತ್ತೊಂದು ಕೋಟಿ ಒಂದು ಲಕ್ಷದ ಹದಿನೇಳು ಸಾವಿರದ ಎರಡು ನೂರ ಐವತ್ತು ರೂಪಾಯಿಗಳು ಮಾತ್ರ)ಗಳ ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಯಲ್ಲಿ

ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆಗೊಳಿಸಿ ಉಳಿದ ರೂ.513,03,51,750/- (ಐದು ನೂರ ಹದಿಮೂರು ಕೋಟಿ ಮೂರು ಲಕ್ಷದ ಐವತ್ತೊಂದು ಸಾವಿರದ ಏಳು ನೂರ ಐವತ್ತು ರೂಪಾಯಿಗಳು ಮಾತ್ರ)ಗಳನ್ನು (ಅನುಬಂಧ) ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲು ಆದೇಶಿಸಿದೆ.

14ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ **ಸದರಿ ಅನುದಾನವನ್ನು ಕಡ್ಡಾಯವಾಗಿ ಈ ಕೆಳಕಂಡ ಚಟುವಟಿಕೆಗಳಿಗೆ ಮಾತ್ರ ನಿಯಮಾನುಸಾರ ವಿನಿಯೋಗಿಸಬೇಕಾಗಿರುತ್ತದೆ.**

- **ನಾಗರೀಕರ ಮೂಲ ಸೇವೆಗಳ ಸ್ಥಿತಿಯನ್ನು ಉತ್ತಮಗೊಳಿಸಲು ನೀರು ಸರಬರಾಜು ಹಾಗೂ ನೈರ್ಮಲ್ಯ**
- **ಒಳಚರಂಡಿ ಮತ್ತು ಗಣತ್ಯಾಜ್ಯ ವಸ್ತುಗಳ ನಿರ್ವಹಣೆ.**
- **ಮಳೆ ನೀರಿನ ಒಳಚರಂಡಿ.**
- **ಸಮುದಾಯ ಸ್ವತ್ತುಗಳ ನಿರ್ವಹಣೆ.**
- **ಬೀದಿ ದೀಪಗಳು, ಪಾದಚಾರಿ ಹಾಗೂ ರಸ್ತೆಗಳ ನಿರ್ವಹಣೆ.**
- **ಸ್ಮಶಾನ ಮತ್ತು ರುದ್ರಭೂಮಿ ನಿರ್ವಹಣೆ.**

**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರ ಕಲ್ಯಾಣಕ್ಕಾಗಿ ಕನಿಷ್ಠ ಶೇ.25 ರಷ್ಟು ಅನುದಾನವನ್ನು ಉಪಯೋಗಿಸಲು ಕಾರ್ಯಕ್ರಮ ರೂಪಿಸುವುದು.**

ಪಂಚಾಯತ್ ರಾಜ್ ಸಂಸ್ಥೆಗಳಿಗೆ ನೀಡಲಾಗುವ ಹಣವನ್ನು ಸರ್ಕಾರದ ಅಧೀನ ಕಾರ್ಯದರ್ಶಿ(ಜಿಲ್ಲಾ ಪಂಚಾಯತ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀದಿಯ ಮೇಲೆ ಡ್ರಾ ಮಾಡಿ ನಂತರ ಆರ್.ಟಿ.ಜಿ.ಎಸ್. ಮುಖಾಂತರ 14ನೇ ಹಣಕಾಸು ಆಯೋಗದ ಉಳಿತಾಯ ಖಾತೆ ಸಂಖ್ಯೆ:64207694077 ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, "ಜಿ ಸೇವಾ" ಬ್ರಾಂಚ್, ಲೇಡಿ ಕರ್ಜನ್ ರಸ್ತೆ, ಬೆಂಗಳೂರು-560001 (IFSC CODE SBMY0040681) ಇವರಿಗೆ ಬಿಡುಗಡೆಗೊಳಿಸಿ, ನಂತರ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನಿಂದ ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸರ್ಕಾರವು ನಿಗಧಿಪಡಿಸಿರುವ ಮೊತ್ತದ ಅನುಸಾರ ಬಿಡುಗಡೆ ಮಾಡಲು ಆದೇಶಿಸಿದೆ.

ಅನುದಾನವು ಗ್ರಾಮ ಪಂಚಾಯತಿಗಳಿಗೆ ತಲುಪಿರುವುದನ್ನು ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಮುಖ್ಯ ಲೆಕ್ಕಾಧಿಕಾರಿಗಳು ದೃಢೀಕರಿಸಿ ಸರ್ಕಾರಕ್ಕೆ ಸಲ್ಲಿಸುವುದು. ಇದರಲ್ಲಿ ಯಾವುದೇ ಲೋಪವಾದಲ್ಲಿ, ಸಂಬಂಧಪಟ್ಟವರಿಂದ ಬಡ್ಡಿ ವಸೂಲಿ ಮಾಡಲು ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ವಹಿಸತಕ್ಕದ್ದು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: ಆಇ 44 ಬಿಜಿಎಲ್ 2016, ದಿನಾಂಕ:10-11-2016ರನ್ವಯ ಲೆಕ್ಕ ಶೀರ್ಷಿಕೆ 2515-00-198-6-11-300(ಯೋಜನೇತರ) ಯಡಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲು ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398 ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸುತ್ತಾ, ಸದರಿ ಅನುದಾನದ ಸಮರ್ಪಕ ಬಳಕೆ ಬಗ್ಗೆ ಸೂಕ್ತ ಮೇಲ್ವಿಚಾರಣೆ ನಡೆಸುವ ವ್ಯವಸ್ಥೆ ಕಲ್ಪಿಸಲು ತಿಳಿಸಿದೆ.
5. ರಾಜ್ಯದ ಮುಖ್ಯ ಲೆಕ್ಕಾಧಿಕಾರಿಗಳಿಗೆ/ಮುಖ್ಯ ಯೋಜನಾಧಿಕಾರಿಗಳಿಗೆ ಕಳುಹಿಸಿದೆ.
6. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸದರಿ ಅನುದಾನವನ್ನು ನಿಯಮಾನುಸಾರ ಬಳಕೆ ಮಾಡಲು ತಿಳಿಸಿದೆ.

7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ಕರ್ನಾಟಕ ವಿಕಾಸ/ ವೆಬ್‌ಸೈಟ್.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ&ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ನಿರ್ದೇಶಕರು (ಪಂ.ರಾಜ್-1&2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.